ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂ. DTE-ADMI0ACM2/122/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು–560 001.
ದಿನಾಂಕ:25–01–2022.

–:: ಸುತ್ತೋಲೆ ::–

**ವಿಷಯ:–** 2021–22ನೇ ಸಾಲಿನ **ಡಿಪ್ಲೋಮಾ ಪ್ರವೇಶಾತಿ ಸಂಬಂಧ ಸಂಗ್ರಹವಾಗಿರುವ ಅರ್ಜಿ ನೋಂದಣಿ ಶುಲ್ಕವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಎಸ್.ಬಿ ಖಾತೆಗೆ ಜಮೆ ಮಾಡುವ ಬಗ್ಗೆ.**

**ಉಲ್ಲೇಖ:–** 1. ಸರ್ಕಾರದ ಪತ್ರ ಸಂ. ಇಡಿ 116 ಡಿಟಿಇ 2021, ದಿ:11–08–2021.

2. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ. DTE-ADMI0ACM2/96/2021, ದಿ:11–08–2021.

–000000–

ಉಲ್ಲೇಖ(1)ರ ಸರ್ಕಾರದ ಪತ್ರದಲ್ಲಿ ಅನುಮತಿಸಿದಂತೆ ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿನ (ಅನುದಾನಿತ ಕೋರ್ಸುಗಳು) ಇಂಜಿನಿಯರಿಂಗ್ ಮತ್ತು ನಾನ್–ಇಂಜಿನಿಯರಿಗ್ ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್ ಲ್ಯಾಟರಲ್ ಎಂಟ್ರಿ ಡಿಪ್ಲೋಮಾ ಕೋರ್ಸುಗಳಿಗೆ 2021–22ನೇ ಶೈಕ್ಷಣಿಕ ಸಾಲಿಗೆ ಪ್ರವೇಶಾತಿಯನ್ನು ಸಂಸ್ಥೆಯ ಪ್ರಾಂಶುಪಾಲರ ಹಂತದಲ್ಲಿ "ಆಫ್–ಲೈನ್" ಮೂಲಕ ಎರಡು ವಿಧಾನಗಳಲ್ಲಿ ಸೀಟು ಆಯ್ಕೆ ಮಾಡಿಕೊಂಡು ಪ್ರವೇಶ ಪಡೆಯುವ ಸಂದರ್ಭದಲ್ಲಿ ಡಿಪ್ಲೋಮಾ ಅರ್ಜಿ ನೋಂದಣಿ ಶುಲ್ಕವನ್ನು **ಸಾಮಾನ್ಯ ವರ್ಗ/2ಎ/2ಬಿ/3ಎ/3ಬಿ ರೂ.100/– & ಪ.ಜಾ/ಪ.ಪಂ/ಪ್ರವರ್ಗ1 ರೂ.50/– ಅಭ್ಯರ್ಥಿಗಳಿಂದ** ನಗದು ರೂಪದಲ್ಲಿ ಪಾವತಿಸಿಕೊಳ್ಳಲು ಉಲ್ಲೇಖ(2)ರ ಪ್ರವೇಶಾಧಿಸೂಚನೆಯಲ್ಲಿ ತಿಳಿಸಲಾಗಿತ್ತು.

ಅದರಂತೆ, ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್ ಲ್ಯಾಟರಲ್ ಎಂಟ್ರಿ ಆಫ್–ಲೈನ್ ಮೂಲಕ ಸೀಟು ಆಯ್ಕೆ ಮಾಡಿಕೊಂಡು ಪ್ರವೇಶ ಪಡೆದ ಅಭ್ಯರ್ಥಿಗಳು ಪ್ರವೇಶ ಸಮಯದಲ್ಲಿ ಪಾವತಿಸಿರುವ ಅರ್ಜಿ ನೋಂದಣಿ ಶುಲ್ಕದಿಂದ ಸಂಗ್ರಹವಾಗಿರುವ ಒಟ್ಟು ಹಣವನ್ನು ಸಂಬಂಧಪಟ್ಟ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರ ಪಿ.ಡಿ. ಖಾತೆಯಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಈ ಕೆಳಕಂಡ ಎಸ್.ಬಿ. ಖಾತೆ ಗೆ NEFT ಮುಖಾಂತರ ಕೂಡಲೇ ಜಮೆ ಮಾಡಲು ಸೂಚಿಸಲಾಗಿದೆ.

| ಬ್ಯಾಂಕ್ | ಖಾತೆಯ ಹೆಸರು | ಖಾತೆ ಸಂ. | ಐ.ಎಫ್.ಎಸ್.ಸಿ ಕೋಡ್ |
|---|---|---|---|
| ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಮಲ್ಲೇಶ್ವರಂ ಶಾಖೆ, ಬೆಂಗಳೂರು | 'ED-KEA-DCET-2021 Application Fee Collection Account | 36843662415 | SBIN0040017 |

ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಮೇಲ್ಕಂಡ ಖಾತೆಗೆ ಜಮೆ ಮಾಡಿದ ಬಗ್ಗೆ ಮಾಹಿತಿಯನ್ನು **ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಸಂಪಿಗೆ ರಸ್ತೆ, ಮಲ್ಲೇಶ್ವರಂ 18ನೇ ಕ್ರಾಸ್, ಬೆಂಗಳೂರು – 560 003** ಇವರಿಗೆ ಕಳುಹಿಸಿ ಅದರ ಪ್ರತಿಯನ್ನು ಆಯುಕ್ತಾಲಯಕ್ಕೆ ಸಲ್ಲಿಸಲು ತಿಳಿಸಲಾಗಿದೆ. ಸದರಿ **ಮಾಹಿತಿಯ ಸಾಫ್ಟ್ ಕಾಪಿಯನ್ನು** ಇ–ಮೇಲ್ ವಿಳಾಸ: keauthority-ka@nic.in ಹಾಗೂ dteacm@hotmail.com ಗೆ ಕಳುಹಿಸಲು ಸಹ ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು(ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

**ಇವರಿಗೆ,**

*ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳಿಗೆ,*

<u>ಪ್ರತಿ ಇವರಿಗೆ ಮಾಹಿತಿಗಾಗಿ:–</u>

1. ಮಾನ್ಯ ಆಯುಕ್ತರವರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಸಂಪಿಗೆ ರಸ್ತೆ, ಮಲ್ಲೇಶ್ವರಂ 18ನೇ ಕ್ರಾಸ್, ಬೆಂಗಳೂರು – 560 003.
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ–ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಡಿವಿಪಿ(2) ವಿಭಾಗಕ್ಕೆ.
8. ನಗದು ವಿಭಾಗಕ್ಕೆ.
9. ಕಛೇರಿ ಪ್ರತಿ.